ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಯರಗೇರಾ–584133, ರಾಯಚೂರು, ಕರ್ನಾಟಕ ರಾಜ್ಯ, ಭಾರತ

Office No. +91 9141030953 ಪರೀಕ್ಷಾ ವಿಭಾಗ E-mail: registrarevrur@gmail.com

ಕ್ರ.ಸಂ: ರಾವಿರಾ/ಪರೀಕ್ಷಾ/2022–23/259 ದಿನಾಂಕ : 16.01.2022

## ಕಚೇರಿ ಆದೇಶ

ವಿಷಯ : 2021–22ನೇ ಸಾಲಿನ ಸ್ನಾತಕ ಪ್ರಥಮ ಸೆಮಿಸ್ಟರ್‌ನ ಬಿ.ಎಸ್ಸಿ ಪದವಿಯ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು UUCMS ನಲ್ಲಿ ನಮೂದಿಸುವ ಕುರಿತು.

*****

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವಂತಹ ಬಿ.ಎಸ್ಸಿ ಪದವಿ ಹೊಂದಿರುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, 2021–22ನೇ ಸಾಲಿನ ಸ್ನಾತಕ ಬಿ.ಎಸ್ಸಿ ಪ್ರಥಮ ಸೆಮಿಸ್ಟರ್‌ನ ಪ್ರಯೋಗಿಕ ಪರೀಕ್ಷೆಯ ಅಂಕಗಳನ್ನು ಬಹಳಷ್ಟು ಮಹಾವಿದ್ಯಾಲಯಗಳು UUCMS ನಲ್ಲಿ ನಮೂದಿಸಿರುವುದಿಲ್ಲ. ಆದ ಕಾರಣ ಸ್ನಾತಕ ಬಿ.ಎಸ್ಸಿ ಪ್ರಥಮ ಸೆಮಿಸ್ಟರ್‌ನ ಫಲಿತಾಂಶ ಪ್ರಕಟಿಸಲು ವಿಳಂಬವಾಗುತ್ತಿದೆ. ಈ ವಿಳಂಬಕ್ಕೆ ಪ್ರಾಂಶುಪಾಲರು ಹಾಗೂ ಸಂಭಂದಿಸಿದ ವಿಷಯದ ಮುಖ್ಯಸ್ಥರುಗಳೇ ನೇರವಾಗಿ ಹೊಣೆಗಾರರಾಗಿರುತ್ತಾರೆ. ಈ ವಿಷಯವನ್ನು ಸರ್ಕಾರದ ಉನ್ನತ ಶಿಕ್ಷಣ ಇಲಾಖೆ ತುಂಬ ಗಂಭೀರವಾಗಿ ಪರಿಗಣಿಸಿದೆ. ಆದ್ದರಿಂದ ಎಲ್ಲಾ ಪ್ರಾಂಶುಪಾಲರುಗಳಿಗೆ ಹಾಗೂ ಸಂಬಂಧಿಸಿದ ವಿಭಾಗದ ಮುಖ್ಯಸ್ಥರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು UUCMS ನಲ್ಲಿ ಅತಿ ತುರ್ತಾಗಿ ದಿನಾಂಕ : 18.01.2023ರ ಒಳಗಾಗಿ ಕಡ್ಡಯವಾಗಿ ನಮೂದಿಸಲು ಈ ಮೂಲಕ ಸೂಚಿಸಲಾಗಿದೆ.

16/01/23

(ಪ್ರೊ.ಯರಿಸ್ವಾಮಿ.ಎಂ)
ಕುಲಸಚಿವರು(ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.

ಗೆ,
ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವಂತಹ ಬಿ.ಎಸ್ಸಿ ಪದವಿ ಹೊಂದಿರುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ಗಮನಕ್ಕೆ ಮತ್ತು ಸೂಕ್ತ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ ಹಾಗೂ ಮಾನ್ಯ ಕುಲಸಚಿವರ ಅಪ್ತ ಸಹಾಯಕ ರಾಯಚೂರು ವಿಶ್ವವಿದ್ಯಾಲಯ ರಾಯಚೂರು.
2. ಕುಲಸಚಿವರು (ಮೌಲ್ಯಮಾಪನ) ಆಪ್ತ ಸಹಾಯಕ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಕಚೇರಿ ಪ್ರತಿ.